ಊ) ಇಲ್ಲ.

ಋ) ಅನ್ವಯಿಸುವುದಿಲ್ಲ.

ಕೆಂಪೇಗೌಡ ಬಸ್ ನಿಲ್ದಾಣದ ನಿಲುಗಡೆ ಮಾಹಿತಿ

845 (1375) ಶ್ರೀ ದಿನೇಶ್ ಗುಂಡೂರಾವ್ (ಗಾಂಧಿನಗರ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದ ಕೆಂಪೇಗೌಡ ಬಸ್ ನಿಲ್ದಾಣದ ಸುತ್ತಮುತ್ತಲು ಖಾಸಗಿ ಬಸ್ ನಿಲುಗಡೆ ಅವಕಾಶ ಕಲ್ಪಿಸಲಾಗಿರುತ್ತದೆಯೇ?

ಆ) ಕೇಂದ್ರ ಬಸ್ ನಿಲ್ದಾಣದಿಂದ 3 ಕಿ.ಮೀ. ದೂರದಲ್ಲಿ ಖಾಸಗಿ ಬಸ್ ನಿಲುಗಡೆಗೆ ಸ್ಥಳವನ್ನು ಗುರುತಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೇಯೇ?

ಇ) ಇಲ್ಲದಿದ್ದಲ್ಲಿ ಖಾಸಗಿ ಬಸ್‌ಗಳಿಂದಾಗುವ ಸಂಚಾರ ಅಡಚಣೆಯನ್ನು ಯಾವ ರೀತಿ ಪರಿಹರಿಸಲು ಸರ್ಕಾರವು ಯೋಜಿಸಿದೆ?

ಈ) ಯಾವಾಗ ಈ ಸಮಸ್ಯೆಯನ್ನು ಪರಿಹರಿಸಲಾಗುವುದು?

ಶ್ರೀ ಆರ್. ಅಶೋಕ್ (ಸಾರಿಗೆ ಸಚಿವರು) :

ಅ) ಇಲ್ಲ.

ಆ) ಪ್ರಸ್ತಾವನೆ ಇರುವುದಿಲ್ಲ.

ಇ) ಮತ್ತು ಈ) ಈ ಬಗ್ಗೆ ಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆಯನ್ನು ಕೋರಲಾಗುವುದು.

ಆರ್.ಟಿ.ಒ. ಚೆಕ್‌ಪೋಸ್ಟ್‌ನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಾಹಿತಿ

846 (966) ಡಾ: ಬಗಲಿ ಸಾರ್ವಭೌಮ ಸಾತಗೌಡ (ಇಂಡಿ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಸಾರಿಗೆ ಇಲಾಖೆಯ ತಪಾಸಣೆ ಠಾಣೆ (ಆರ್.ಟಿ.ಒ. ಚೆಕ್‌ಪೋಸ್ಟ್)ಗಳಿವೆ; ಈ ಎಲ್ಲಾ ಚೆಕ್‌ಪೋಸ್ಟ್‌ಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮೋಟಾರು ವಾಹನ ನಿರೀಕ್ಷಕರು ಮತ್ತು ಹಿರಿಯ ಮೋಟಾರು ವಾಹನ ನಿರೀಕ್ಷಕರು ಯಾರು ಯಾರು; ಇವರು ಯಾವ ದಿನಾಂಕದಿಂದ ಈ ಸ್ಥಳದಲ್ಲಿ ಕಾರ್ಯ ನಿರ್ವಹಿಸುತ್ತಿದ್ದರು;